# ಕರ್ನಾಟಕ ವಿಧಾನ ಪರಿಷತ್

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 611 |
| ಸದಸ್ಯರ ಹೆಸರು | : | ಶ್ರೀ ಐವನ್ 'ಡಿ' ಸೋಜಾ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 13-12-2024 |
| ಉತ್ತರಿಸುವವರು: | : | ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು. |

| ಕ್ರ.ಸಂ | ವಿಷಯ | ಮಾಹಿತಿ |
|---|---|---|
| ಅ | ರಾಜ್ಯದಲ್ಲಿ ಅಂಗನವಾಡಿಗಳ ಬಿಲ್ಲುಗಳನ್ನು ಪಾವತಿಸದೇ ವಿದ್ಯುತ್ ಚ್ಛಕ್ತಿ ಇಲಾಖೆಯವರು ವಿದ್ಯುತ್ ಕಡಿತ ಮಾಡಿರುವ ಪ್ರಕರಣಗಳೆಷ್ಟು; (ಜಿಲ್ಲಾವಾರು ವಿವರ ನೀಡುವುದು) | ರಾಜ್ಯದಲ್ಲಿ 69,919 ಅಂಗನವಾಡಿಗಳು ಕಾರ್ಯ ನಿರ್ವಹಿಸುತ್ತಿದ್ದು, ಈ ಪೈಕಿ 528 ಅಂಗನವಾಡಿ ಕೇಂದ್ರಗಳಲ್ಲಿ ವಿದ್ಯುತ್ ಕಡಿತವಾಗಿದ್ದು, ಜಿಲ್ಲಾವಾರು ವಿವರ ಅನುಬಂಧದಲ್ಲಿ ಒದಗಿಸಿದೆ. |
| ಆ | ಅಂಗನವಾಡಿಗಳಿಗೆ ಕಟ್ಟಡಗಳನ್ನು ನಿರ್ಮಾಣ ಮಾಡಲು ಇಲಾಖೆ ಮೀಸಲಿಟ್ಟ ಹಣವೆಷ್ಟು; (ವಿವರ ನೀಡುವುದು) | 2024-25 ನೇ ಸಾಲಿನ ಆಯವ್ಯಯದಲ್ಲಿ ಐಸಿಡಿಎಸ್-ನರೇಗಾ ಯೋಜನೆಯಡಿ ರೂ.5000.00 ಲಕ್ಷ ಮತ್ತು ಅಂಗನವಾಡಿ ಕಟ್ಟಡಗಳು (ನಗರ) ಯೋಜನೆಯಡಿ ರೂ.3500.00 ಲಕ್ಷಗಳ ಅನುದಾನವನ್ನು ಮೀಸಲಿರಿಸಲಾಗಿದೆ. |
| ಇ | ರಾಜ್ಯದಲ್ಲಿ ಅಂಗನವಾಡಿಗಳಲ್ಲಿ ಮಕ್ಕಳ ಸಂಖ್ಯೆ ಕಡಿಮೆಯಾಗುತ್ತಿದ್ದು, ಈ ಬಗ್ಗೆ ಕೈಗೊಂಡಿರುವ ಕ್ರಮವೇನು; | ಅಂಗನವಾಡಿ ಕೇಂದ್ರಗಳಲ್ಲಿ ನೋಂದಣಿಯಾಗುತ್ತಿರುವ ಹಾಗೂ ಇಲಾಖೆಯ ಸೇವೆ ಪಡೆಯುತ್ತಿರುವ ಮಕ್ಕಳ ಸಂಖ್ಯೆ ವರ್ಷದಿಂದ ವರ್ಷಕ್ಕೆ ಏರಿಕೆಯಾಗುತ್ತಿದ್ದು, ಕೇಂದ್ರ ಸರ್ಕಾರದ ಪೋಷಣ ತಂತ್ರಾಂಶದಲ್ಲಿನ ಮಾಹಿತಿಯಂತೆ 2023-24ನೇ ಸಾಲಿನಲ್ಲಿ ಒಟ್ಟು 35,43,021 ಮಕ್ಕಳು ನೋಂದಣಿಯಾಗಿದ್ದರೆ, 2024-25ನೇ ಸಾಲಿನಲ್ಲಿ 35,83,245 ಮಕ್ಕಳ ನೋಂದಣಿಯಾಗಿರುತ್ತದೆ.<br><br>ಮಕ್ಕಳನ್ನು ಅಂಗನವಾಡಿ ಕೇಂದ್ರಗಳಿಗೆ ಆಕರ್ಷಿಸಲು, ಅಂಗನವಾಡಿಗಳನ್ನು ಸಕ್ಷಮ್ ಅಂಗನವಾಡಿ ಕೇಂದ್ರಗಳಾಗಿ ಉನ್ನತೀಕರಿಸಿ ಮೂಲಭೂತ ಸೌಕರ್ಯಗಳನ್ನು ಮೇಲ್ದರ್ಜೆಗೇರಿಸಲಾಗುತ್ತಿದೆ. ಅಲ್ಲದೇ, 2024-25ನೇ ಸಾಲಿನಲ್ಲಿ ಪ್ರಾಯೋಗಿಕವಾಗಿ ಬೆಂಗಳೂರು ನಗರದ 250 ಅಂಗನವಾಡಿ ಕೇಂದ್ರಗಳಲ್ಲಿ ಎಲ್.ಕೆ.ಜಿ. ಹಾಗೂ ಯು.ಕೆ.ಜಿ. ತರಗತಿಗಳನ್ನು ಪ್ರಾರಂಭಿಸಲಾಗಿದೆ. |
| ಈ | ಪ್ರಸ್ತುತ ಕನ್ನಡ ಮಾಧ್ಯಮ ಶಾಲೆಗಳು ಮುಚ್ಚಿರುವುದರಿಂದ ಅಲ್ಲಿ ಅಂಗನವಾಡಿಗಳನ್ನು ನಡೆಸಲು ಅವಕಾಶ ನೀಡಿದ್ದಲ್ಲಿ ಆರ್ಥಿಕ ವೆಚ್ಚ ಕಡಿಮೆಯಾಗಲಿದ್ದು, ಸರ್ಕಾರ ಚಿಂತಿಸಿದೆಯೇ; ಈ ಬಗ್ಗೆ ತೆಗೆದುಕೊಳ್ಳುವ ಕ್ರಮವೇನು? | 4807 ಶಾಲಾ ಕಟ್ಟಡಗಳಲ್ಲಿ ಅಂಗನವಾಡಿಗಳನ್ನು ಸ್ಥಳಾಂತರಿಸಲಾಗಿದ್ದು, ಶಿಕ್ಷಣ ಇಲಾಖೆಯ ಸಹಯೋಗದೊಂದಿಗೆ ಸ್ಥಳಾವಕಾಶ ಇರುವ ಸರ್ಕಾರಿ ಶಾಲೆಗಳಲ್ಲಿ ಅಂಗನವಾಡಿಗಳನ್ನು ಸ್ಥಳಾಂತರಿಸಲು ಕ್ರಮ ವಹಿಸಲಾಗುತ್ತಿದೆ. |

ಸಂಖ್ಯೆ: ಮಮಇ 309 ಮಮಅ 2024

**(ಲಕ್ಷ್ಮೀ ಆರ್.ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಸಚಿವರು